All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

21.08.2025 6.40P.M.

<><><><>

ಮುಖ್ಯಾಂಶಗಳು

- ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕುಂಠಿತಗೊಂಡಿಲ್ಲ; ಮೇಲ್ಮನೆಯಲ್ಲಿ ಮುಖ್ಯಮಂತ್ರಿ ಸ್ಪಷ್ಟನೆ
- ಬೆಂಗಳೂರಿನಲ್ಲಿ ಕಸ ವಿಲೇವಾರಿಗಾಗಿ ೩೩ ಪ್ಯಾಕೇಜ್‌ಗಳಾಗಿ ಟೆಂಡರ್; ತ್ಯಾಜ್ಯದಿಂದ ವಿದ್ಯುತ್ ಉತ್ಪಾದಿಸುವ ಗುರಿ
- ಬೆಂಗಳೂರಿನಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ಬಂಡವಾಳ ಹೂಡಿಕೆಗೆ ಕೇಂದ್ರ ಸರ್ಕಾರ ಅಡ್ಡಿ ಹೇಳಿಕೆ; ವಿಧಾನಸಭೆಯಲ್ಲಿ ಗದ್ದಲ
- ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮತ ಖರೀದಿ ಆರೋಪ; ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು
- ಉತ್ತರ ಕರ್ನಾಟಕದಲ್ಲಿ ಪ್ರವಾಹ ಭೀತಿ; ಹಾವೇರಿಯಲ್ಲಿ ೮ ಸೇತುವೆ ಮುಳುಗಡೆ; ಅಪಾರ ಪ್ರಮಾಣದ ಬೆಳೆ ನಷ್ಟ

<><><><>

ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಲ್ಮನೆಯಲ್ಲಿ ಪ್ರತಿಪಕ್ಷ ನಾಯಕರಿಗೆ ತಿರುಗೇಟು ನೀಡಿದ್ದಾರೆ. ಈ ವೇಳೆ ಅಭಿವೃದ್ಧಿ ವಿಚಾರವಾಗಿ ಆಡಳಿತ ಹಾಗೂ ವಿಪಕ್ಷ ನಾಯಕರ ಮಧ್ಯೆ ವಾಗ್ವಾದ ನಡೆಯಿತು. ಈ ಕುರಿತಂತೆ ಸದನದಲ್ಲಿ ಚರ್ಚೆಗೆ ಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು. ಬಳಿಕ ಮೈಕ್ರೋ ಫೈನಾನ್ಸ್ ಕಾಯ್ದೆ ಬಂದ ಮೇಲೂ ಗ್ರಾಹಕರ ಮೇಲೆ ಕಿರುಕುಳ ನಡೆಯುತ್ತಿದೆ ಎಂದು ಸದಸ್ಯ ಸಿ.ಎನ್. ಮಂಜೇಗೌಡ ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡವರಿಗೆ ಪರಿಹಾರ ನೀಡುವ ವ್ಯವಸ್ಥೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇನ್ನು ಮುಂದೆ ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಮೃತಪಟ್ಟರೆ ೫ ಲಕ್ಷ ಪರಿಹಾರ ನೀಡುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನ ಕಸ ವಿಲೇವಾರಿಗೆ ೨೮ ವಿಧಾನಸಭಾ ಕ್ಷೇತ್ರಗಳಲ್ಲಿ ೩೩ ಪ್ಯಾಕೇಜ್‌ಗಳಾಗಿ ವಿಂಗಡಿಸಿ, ಟೆಂಡರ್ ಕರೆಯಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ವಿಧಾನಪರಿಷತ್‌ನಲ್ಲಿ ಸ್ಪಷ್ಟಪಡಿಸಿದ್ದಾರೆ. ನಾಲ್ಕು ಜಾಗಗಳಲ್ಲಿ ತ್ಯಾಜ್ಯದಿಂದ ಗ್ಯಾಸ್, ವಿದ್ಯುತ್ ಉತ್ಪಾದಿಸುವ ಯೋಜನೆ ರೂಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಬೆಂಗಳೂರಿನ ಕಸದ ಮಾಫಿಯಾ ಬೇಧಿಸುವುದು ಸುಲಭವಲ್ಲ ಎಂದು ತಿಳಿಸಿದ ಅವರು, ಕಸದ ಮೇಲೆ ಸೆಸ್ ವಿಧಿಸಿದ್ದು ಬಿಜೆಪಿ ಸರ್ಕಾರ ಎಂದು ಹೇಳಿದ್ದಾರೆ. ಕಟ್ಟಡ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಸುರಿಯುವವರನ್ನು ಗುರುತಿಸಿ ಪ್ರಕರಣ ದಾಖಲಿಸಲಾಗುವುದು ಹಾಗೂ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗುವುದು ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

<><><><>

ಕೇಂದ್ರ ಸರ್ಕಾರ ರಾಜ್ಯಕ್ಕೆ ಜಿಎಸ್‌ಟಿ ತೆರಿಗೆ ಹಣ ನೀಡುವಲ್ಲಿ ಅನ್ಯಾಯ ಮಾಡಿದೆ ಹಾಗೂ ಬೆಂಗಳೂರಿನಲ್ಲಿ ಬಹು ರಾಷ್ಟ್ರೀಯ ಕಂಪನಿಗಳು ಬಂಡವಾಳ ಹೂಡಿಕೆ ಮಾಡಲು ಕೇಂದ್ರ ಸರ್ಕಾರ ಅಡ್ಡಗಾಲು ಹಾಕುತ್ತಿದೆ ಎಂಬ ವಿಚಾರ ವಿಧಾನಸಭೆಯಲ್ಲಿಂದು ಗದ್ದಲಕ್ಕೆ ಕಾರಣವಾಯಿತು. ನಿಯಮ ೬೯ರ ಅಡಿಯಲ್ಲಿ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಶರತ್ ಬಚ್ಚೇಗೌಡ, ಕೇಂದ್ರ ಸರ್ಕಾರದ ಮಲತಾಯಿ ಧೋರಣೆ ಮೇಲೆ ಬೆಳಕು ಚೆಲ್ಲಬೇಕಾದರೆ ಶ್ವೇತಪತ್ರ ಹೊರಡಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಸೇರಿದಂತೆ ಬಿಜೆಪಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು.

<><><><>

೨೦೧೮ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಗಳನ್ನು ಖರೀದಿಸಿದ್ದಾರೆ ಎಂದು ಆರೋಪಿಸಿ ಮಾಜಿ ಸಚಿವ ಸಿ.ಎಂ. ಇಬ್ರಾಹಿಂ ನೀಡಿದ ಹೇಳಿಕೆ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಬಿಜೆಪಿ ನಿಯೋಗ ರಾಜ್ಯ ಚುನಾವಣಾ ಆಯೋಗವನ್ನು ಒತ್ತಾಯಿಸಿದೆ. ಸಿ.ಎಂ. ಇಬ್ರಾಹಿಂ ನೀಡಿದ ಹೇಳಿಕೆ ನಿಜವಾಗಿದ್ದಲ್ಲಿ ಅಂತಹ ಮತಗಳಿಂದ ಆಯ್ಕೆಗೊಂಡ ಅಭ್ಯರ್ಥಿಯ ಚುನಾವಣೆಯನ್ನು ಅಸಿಂಧುಗೊಳಿಸಬೇಕು ಹಾಗೂ ಅರಸೀಕೆರೆ ಶಾಸಕ ಶಿವಲಿಂಗೇಗೌಡ ಲೋಕಸಭಾ ಚುನಾವಣೆಯಲ್ಲಿ ೭ ಕೋಟಿ ಹಣ ಹಂಚಬೇಕು ಎಂದು ಮಾತನಾಡಿರುವ ವಿಡಿಯೋ ಕುರಿತಂತೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದೆ. ವಿಧಾನಪರಿಷತ್ ಮಾಜಿ ಸದಸ್ಯ ಸಿ.ಎನ್. ಅಶ್ವತ್ಥ ನಾರಾಯಣ ಹಾಗೂ ಪರಿಷತ್ ಸದಸ್ಯರಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಅರುಣ್ ಶಹಾಪುರ್ ಅವರನ್ನೊಳಗೊಂಡ ನಿಯೋಗ ದೂರು ಸಲ್ಲಿಸಿದೆ.

<><><><>

ಮುಂಬರುವ ಗಣೇಶ ಚತುರ್ಥಿ, ದಸರಾ, ದೀಪಾವಳಿ ಮತ್ತು ಛತ್ ಪೂಜೆಗಳ ಹಬ್ಬಗಳ ಸಂದರ್ಭದಲ್ಲಿ ಪ್ರಯಾಣಿಕರಿಗೆ ಅನುಕೂಲವಾಗಲು ನೈಋತ್ಯ ರೈಲ್ವೆ ವಿಶೇಷ ಸೇವೆಗಳನ್ನು ಒದಗಿಸಲಿದೆ. ಬೆಂಗಳೂರಿನಿಂದ ದೇಶದ ವಿವಿಧೆಡೆಗೆ ವಿಶೇಷ ರೈಲುಗಳು ಸಂಚರಿಸಲಿವೆ. ಹೆಚ್ಚಿನ ಮಾಹಿತಿಗಾಗಿ ಪ್ರಯಾಣಿಕರು ಭಾರತೀಯ ರೈಲ್ವೆಯ ಅಧಿಕೃತ ವೆಬ್‌ಸೈಟ್‌ಗೆ ಭೇಟಿ

ನೀಡಬಹುದು. ಇಲ್ಲವೇ ಸಹಾಯವಾಣಿ ಸಂಖ್ಯೆ ೧೩೯ಕ್ಕೆ ಕರೆ ಮಾಡಬಹುದು ಎಂದು ನೈಋತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ದೇಶದಲ್ಲಿ ರಿಯಲ್ ಮನಿ ಆನ್‌ಲೈನ್ ಗೇಮಿಂಗ್ ತಡೆಗೆ ಕೇಂದ್ರ ಸರ್ಕಾರ ಮುಂದಾಗಿರುವುದು ಶ್ಲಾಘನೀಯ ಎಂದು ಮೈಸೂರು ಒಡನಾಡಿ ಸಂಸ್ಥೆಯ ಕಾರ್ಯದರ್ಶಿ ಕೆ.ವಿ. ಸ್ಟ್ಯಾನ್ಲಿ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿರುವ ಅವರು, ಲಕ್ಷಾಂತರ ಯುವಕರು ಉದ್ಯೋಗವನ್ನು ಮಾಡದೆ ಹಾಗೂ ಉದ್ಯೋಗದಿಂದ ಗಳಿಸಿದ ಹಣವನ್ನು ದುರುಪಯೋಗ ಮಾಡುತ್ತಿದ್ದರು. ಕೇಂದ್ರ ಸರ್ಕಾರ ಈ ತೀರ್ಮಾನ ಕಲ್ಯಾಣ ರಾಷ್ಟ್ರದ ಉತ್ತಮ ನಡೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

<><><>

ಯಾದಗಿರಿ ಶಹಾಪುರ ತಾಲ್ಲೂಕಿನ ಕೊಳ್ಳೂರ(ಎಂ) ಗ್ರಾಮದ ಬಳಿಯ ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆಗೆ ಪ್ರವಾಹದ ಹೆಚ್ಚಿನ ನೀರು ಕೃಷ್ಣಾ ನದಿಗೆ ಹರಿದು ಬರುತ್ತಿರುವುದರಿಂದ ಶಹಾಪುರ-ದೇವದುರ್ಗ ರಾಜ್ಯ ಹೆದ್ದಾರಿಯ ರಸ್ತೆ ಸಂಚಾರವನ್ನು ಮುಂಜಾಗ್ರತಾ ಕ್ರಮವಾಗಿ ಸ್ಥಗಿತಗೊಳಿಲಾಗಿದೆ. ನೆರೆ ಮಹಾರಾಷ್ಟ್ರದಲ್ಲಿ ಹೆಚ್ಚಿನ ಮಳೆ ಯಾಗುತ್ತಿರುವುದರಿಂದ ನಾರಾಯಣಪುರದ ಬಸವಸಾಗರ ಜಲಾಶಯದಿಂದ ಕೃಷ್ಣಾ ನದಿಗೆ ೨ ಲಕ್ಷದ ೬೦ ಸಾವಿರ ಕ್ಯೂಸೆಕ್ ನೀರು ಹರಿಬಿಟ್ಟಿದ್ದಾರೆ. ಇದರಿಂದ ಪ್ರವಾಹದ ನೀರು ತಗ್ಗು ಪ್ರದೇಶದ ಜಮೀನುಗಳಲ್ಲಿ ನುಗ್ಗಿದೆ. ನದಿ ಪಾತ್ರದಲ್ಲಿ ಬಿತ್ತನೆ ಮಾಡಿದ ಹತ್ತಿ, ಭತ್ತ, ಮೆಣಸಿನಕಾಯಿ ಬೆಳೆಗೆ ಸಂಕಷ್ಟ ಎದುರಾಗಿದೆ. ಉತ್ತರ ಕನ್ನಡ ಜಿಲ್ಲೆಯ ಕಾಳಿನದಿ ಯೋಜನೆ ೧ ನೇ ಹಂತ ಸೂಪಾ ಆಣೆಕಟ್ಟೆಯ ಜಲಾನಯನ ಪ್ರದೇಶದಲ್ಲಿ ಸತತವಾಗಿ ಮಳೆ ಬೀಳುತ್ತಿದ್ದು, ಜಲಾಶಯ ಭರ್ತಿಯಾಗಿದೆ. ಹೀಗಾಗಿ ಹೆಚ್ಚುವರಿ ನೀರನ್ನು ಜಲಾಶಯದಿಂದ ಯಾವುದೇ ಸಮಯದಲ್ಲಿ ಹೊರಬಿಡಲಾಗುವುದು ಎಂದು ಕೆ.ಪಿ.ಸಿ ಅಧಿಕಾರಿಗಳು ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದ್ದಾರೆ. ಹಾವೇರಿ ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಜಿಲ್ಲೆಯಲ್ಲಿರುವ ವರದಾ, ಧರ್ಮಾ, ತುಂಗಭದ್ರಾ ಹಾಗೂ ಕುಮದ್ವತಿ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿದ್ದು, ಜಿಲ್ಲೆಯ ಎಂಟು ಸೇತುವೆಗಳು ಮುಳುಗಡೆಯಾಗಿವೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಸೆಪ್ಟೆಂಬರ್ ೧ ರಂದು ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ಬೆಳ್ಳಿ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾಂಸ್ಕೃತಿಕ ನಗರಿ ಮೈಸೂರಿಗೆ ಆಗಮಿಸಲಿದ್ದಾರೆ. ಈ ಸಂಬಂಧ ಅಧಿಕಾರಿಗಳು ಅಗತ್ಯ ಸಿದ್ದತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ ರೆಡ್ಡಿ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಶಿಷ್ಟಾಚಾರದಲ್ಲಿ ಯಾವುದೇ

ಲೋಪವಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ಎಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><>

ಪ್ರಾದೇಶಿಕ ಅಸಮತೋಲನ ನಿವಾರಣಾ ಕಾರ್ಯಕ್ರಮಗಳಡಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ ೧೦ ವರ್ಷಗಳಲ್ಲಿ ಆದ ಅಭಿವೃದ್ಧಿ ಹಾಗೂ ಬದಲಾವಣಗಳೇನು ಎಂಬುದನ್ನು ಪರಿಶೀಲಿಸಿ ಅಂಕಿ-ಅಂಶ ವಿವರ ಸಂಗ್ರಹಿಸಲಾಗುತ್ತಿದೆ ಎಂದು ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿಯ ಸದಸ್ಯ ಕಾರ್ಯದರ್ಶಿ ಡಾ.ಆರ್.ವಿಶಾಲ್ ತಿಳಿಸಿದ್ದಾರೆ. ನಂಜುಂಡಪ್ಪ ವರದಿಯ ಪ್ರಕಾರ ರಾಜ್ಯದಲ್ಲಿ ಅತ್ಯಂತ ಹಿಂದುಳಿದ ತಾಲ್ಲೂಕುಗಳ ಪಟ್ಟಿಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ತಾಲ್ಲೂಕುಗಳೂ ಇವೆ. ಈ ತಾಲ್ಲೂಕುಗಳನ್ನು ವಿಶೇಷವಾಗಿ ಗಮನಿಸಿ ಅಭಿವೃದ್ಧಿಗೆ ಆದ್ಯತೆ ನೀಡಿ ಪ್ರಾದೇಶಿಕ ಅಸಮತೋಲನ ನಿವಾರಿಸಲು ಸಮಿತಿ ಕೆಲಸ ಮಾಡುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ದಾವಣಗೆರೆ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳ ನಿಯಂತ್ರಣ ಹಾಗೂ ಹೆಚ್ಚುತ್ತಿರುವ ಸಂಚಾರ ನಿಯಮಗಳ ಉಲ್ಲಂಘನೆ ತಡೆಗೆ ಮೂರು ಹೊಸ ಪೊಲೀಸ್ ಠಾಣೆಗಳನ್ನು ತೆರೆಯುವಂತೆ ಗೃಹ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ದಾವಣಗೆರೆ ತಾಲ್ಲೂಕಿನ ಆನಗೋಡು, ಚನ್ನಗಿರಿ ತಾಲ್ಲೂಕಿನ ನಲ್ಲೂರಿನಲ್ಲಿ ಕಾನೂನು ಸುವ್ಯವಸ್ಥೆ ಪೊಲೀಸ್ ಠಾಣೆ ಹಾಗೂ ಹರಿಹರ ನಗರದಲ್ಲಿ ಸಂಚಾರ ನಿಯಂತ್ರಣ ಪೊಲೀಸ್ ಠಾಣೆ ತೆರೆಯುವಂತೆ ಗೃಹ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ.

<><><>

ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಹಯೋಗದಲ್ಲಿ ಬಳ್ಳಾರಿ ನಗರದಲ್ಲಿಂದು 'ಹೆಚ್ಐವಿ ತಡೆಗಟ್ಟಲು ಐಇಸಿ ಪ್ರಚಾರ ಆಂದೋಲನ' ಅಂಗವಾಗಿ ಬೈಕ್ ರ್‍ಯಾಲಿ ನಡೆಯಿತು.  ಶಸ್ತ್ರಚಿಕಿತ್ಸಕ ಡಾ.ಎನ್ ಬಸಾರೆಡ್ಡಿ ಹೆಚ್ಐವಿ ಸೋಂಕಿಗೆ ಜೀವನ ಪರ್ಯಂತ್ಯ ಚಿಕಿತ್ಸೆಗೊಳಪಡಬೇಕಾದ ಅನಿವಾರ್ಯವಿದ್ದು, ಯುವ ಪೀಳಿಗೆ ಹೆಚ್ಐವಿ ಸೋಂಕು ಬಗೆಗಿನ ಜಾಗೃತಿ ಹೊಂದಬೇಕು ಎಂದು ತಿಳಿಸಿದರು.  ಹೆಚ್ಐವಿ ಸೋಂಕು ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಕೈಜೋಡಿಸುವಂತೆ ಮನವಿ ಮಾಡಿದರು.

<><><>

ಧಾರವಾಡ ಜಿಲ್ಲೆಯ ಅಳ್ನಾವರ ತಾಲೂಕಿನ ಹೂಲಿಕೇರಿ ಗ್ರಾಮದ ಇಂದಿರಮ್ಮನ ಕೆರೆಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಗ್ರಾಮದ ಎರಡು ಹಳ್ಳಗಳು ಹರಿಯುವ ಸ್ಥಳದಲ್ಲಿ ಹೊಲ, ಮನೆಗಳಿಗೆ ದಿನನಿತ್ಯ ಹೋಗಿ ಬರಲು ಅನುಕೂಲವಾಗುವಂತೆ ಕಿರು ಸೇತುವೆಯನ್ನು ನಿರ್ಮಿಸಬೇಕೆಂದು ರೈತರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಗೋಮಾಳ ಭೂಮಿಯನ್ನು ಕೆಲವರು ಒತ್ತುವರಿ ಮಾಡಿ, ಬಿತ್ತನೆ ಮಾಡುತ್ತಿದ್ದಾರೆ. ಈ ಭಾಗದ ಗೌಳಿ ಜನರಿಗೆ ಹಾಗೂ ಗ್ರಾಮದ ಭೂ ರಹಿತ ಜನರಿಗೆ ಗೋವು, ದನಕರು ಮೇಯಿಸಲು ಭೂಮಿ ಇಲ್ಲದಂತಾಗಿದೆ.

ತಕ್ಷಣ ಗೋಮಾಳ ಭೂಮಿ ಸಮೀಕ್ಷೆ ಮಾಡಿ, ಒತ್ತುವರಿ ತೆರವುಗೊಳಿಸಬೇಕು ಎಂದು ಗೌಳಿ ಸಮುದಾಯ ಮನವಿ ಸಲ್ಲಿಸಿದೆ.

<><><><>

ಧರ್ಮಸ್ಥಳ ಕ್ಷೇತ್ರದ ಅಪಪ್ರಚಾರದ ವಿರುದ್ಧ ರಾಜ್ಯಾದ್ಯಂತ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ನಾಳೆಯಿಂದ ಧರ್ಮದ ಉಳಿವಿಗಾಗಿ ಧರ್ಮ ಯುದ್ಧ ಎಂಬ ಹೆಸರಿನಲ್ಲಿ ಬಿಜೆಪಿ ಪ್ರತಿಭಟನೆ ನಡೆಸಲು ನಿರ್ಧರಿಸಿದೆ.  ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಸ್‌ಐಟಿ ತನಿಖೆಗೆ ಬಿಜೆಪಿ ಬೆಂಬಲವಿದೆ. ಆದರೆ ಈ ಪ್ರಕರಣದ ಹಿಂದೆ ಯೋಜಿತ ಪಿತೂರಿಯಿದೆ ಎಂದು ಅವರು ದೂರಿದ್ದಾರೆ.

<><><><>

ಅಂಚೆ ಇಲಾಖೆಯಿಂದ ೬ ರಿಂದ ೯ ನೇ ತರಗತಿ ವಿದ್ಯಾರ್ಥಿಗಳಿಗೆ ಅಂಚೆ ಚೀಟಿಗಳ ಸಂಗ್ರಹ ಉತ್ತೇಜಿಸಲು ದೀನ್ ದಯಾಳ್ ಸ್ಪರ್ಶ ಯೋಜನೆಯಡಿ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.  ಈ ಯೋಜನೆಯು ಮಕ್ಕಳಿಗೆ ಅಂಚೆ ಚೀಟಿಗಳ ಮಹತ್ವ ಮತ್ತು ಸಂಗ್ರಹದ ಹವ್ಯಾಸ ಬೆಳೆಸುವ ಗುರಿಯನ್ನು ಹೊಂದಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>